ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(15)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE: 21/3/21

# ಉಳ್ಳವರಿಗೆ ಮೀಸಲಾತಿ ಅವಶ್ಯಕತೆ ಇಲ್ಲ: ವಿಶ್ವನಾಥ್

ಉದಯ 20/3/21

**ಮೈಸೂರು:** ಯಾವುದೇ ವರ್ಗದ ಉಳ್ಳವರಿಗೆ ಮೀಸಲಾತಿ ನೀಡುವ ಅವಶ್ಯಕತೆ ಇಲ್ಲ, ಬದಲಿಗೆ ಯಾವ ಸಮುದಾಯದಲ್ಲಿ ಬಡವರಿದ್ದಾರೋ ಅವರಿಗೆ ಮೀಸಲಾತಿ ಅಗತ್ಯವಿದೆ ಎಂದು ವಿಧಾನ ಪರಿಷತ್ತಿನ ಸದಸ್ಯ ಎಚ್. ವಿಶ್ವನಾಥ್ ಹೇಳಿದರು.



ರಾಜ್ಯದಲ್ಲಿ ಮೀಸಲಾತಿಗಾಗಿ ಆಗ್ರಹಿಸಿ ವಿವಿಧ ಸಮುದಾಯಗಳ ಹೋರಾಟ ವಿಚಾರವಾಗಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ, ಯಾವುದೇ ಜಾತಿಯಲ್ಲಿನ ಉಳ್ಳವರಿಗೆ ಮೀಸಲಾತಿ ನೀಡಬಾರದು. ನನಗೆ, ಸಿದ್ದರಾಮಯ್ಯ, ಎಂಟಿಬಿ ನಾಗರಾಜ್‌ಗೆ ಹಾಗೂ ದುಡ್ಡು ಮಾಡಿರುವ ಈಶ್ವರಪ್ಪನಿಗೆ ಎಸ್‌ಟಿ ಮೀಸಲಾತಿ ಕೇಳುತ್ತಿಲ್ಲ ಎಂದರು.

ಅಂತೆಯೇ ವಿ. ಶ್ರೀನಿವಾಸಪ್ರಸಾದ್ ಹಾಗೂ ಮಕ್ಕಳಿಗೆ, ಖರ್ಗೆ ಮತ್ತು ಮಕ್ಕಳಿಗೆ, ಗೋವಿಂದ ಕಾರಜೋಳ ಹಾಗೂ ಮಕ್ಕಳಿಗೆ ಮೀಸಲಾತಿ ಅವಶ್ಯಕತೆ ಇದೆಯಾ? ಎಂದು ಪ್ರಶ್ನಿಸಿದ ಅವರು, ಯಾವ ಸಮುದಾಯದಲ್ಲಿ ಬಡವರಿದ್ದಾರೋ ಅವರಿಗಾಗಿ ಮೀಸಲಾತಿ ಹೋರಾಟ ಮಾಡುತ್ತಿದ್ದೇವೆ. ಕುರುಬ ಸಮುದಾಯದ ಬಡವರಿಗಾಗಿ ನಾನು ಹೋರಾಟ ಮಾಡುತ್ತಿದ್ದೇವೆ. ಈ ಸಂಬಂಧ ಶ್ರೀನಿವಾಸಪ್ರಸಾದ್ ಅವರು ನೋಡಿ ಮಾತನಾಡಬೇಕು ಎಂದರು.

ಬಜೆಟ್ ಅಧಿವೇಶನದ ವಿಚಾರವಾಗಿ ಪ್ರತಿಕ್ರಿಯಿಸಿ, ಸದನದಲ್ಲಿ ಅರ್ಥಪೂರ್ಣ ಚರ್ಚೆ ನಡೆಯುತ್ತಿಲ್ಲ, ಯಾವ ಸುಖಕ್ಕಾಗಿ ಬಜೆಟ್ ಅಧಿವೇಶನ ನಡೆಸುತ್ತಿದ್ದಾರೆ ಗೊತ್ತಿಲ್ಲ. ಮೆಕ್ಯಾನಿಕಲ್ ಆಗಿ ಸದನ ನಡೆಯುತ್ತಿದೆ. ಸದನ ಮುಗಿದರೆ ಸಾಕು ಎನ್ನುವ ರೀತಿ ಸದನದ ಚರ್ಚೆ ನಡೆಯುತ್ತಿದೆ ಎಂದರು.